All India Radio: Bangalore
National Bulletin In Kannada
29.03.2026 19.35 hrs
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

***************

ಮುಖ್ಯಾಂಶಗಳು

೧. ಬಿಕ್ಕಟ್ಟಿನ ಪರಿಸ್ಥಿತಿ ಎದುರಿಸಲು ಎಲ್ಲಾ ಭಾರತೀಯರು ಒಗ್ಗಟಿನಿಂದ ಇರುವಂತೆ ಮನ್ ಕಿ ಬಾತ್‌ನ ೧೩೨ನೇ ಆವೃತ್ತಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಕರೆ

೨. ದೇಶದಲ್ಲಿ ಪೆಟ್ರೋಲ್, ಡಿಸೇಲ್ ದಾಸ್ತಾನು ಲಭ್ಯ; ಪ್ರತಿ ದಿನ ೫೫ ಲಕ್ಷಕ್ಕೂ ಹೆಚ್ಚು ಎಲ್‌ಪಿಜಿ ಸಿಲಿಂಡರ್‌ಗಳ ವಿತರಣೆ - ಕೇಂದ್ರ ಸರ್ಕಾರ

೩. ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ವಿದೇಶಾಂಗ ನೀತಿ ಖಂಡಿಸಿ ಅಮೆರಿಕಾ, ಯುರೋಪ್‌ನಾದ್ಯಂತ ಬೃಹತ್ ಪ್ರತಿಭಟನೆ

೪. ಐಪಿಎಲ್ ಟಿ-೨೦ ಕ್ರಿಕೆಟ್; ಕೊಲ್ಕತ್ತಾ ನೈಟ್‌ರೈಡರ್ಸ್ ವಿರುದ್ಧ ಟಾಸ್ ಗೆದ್ದ ಮುಂಬೈ ಇಂಡಿಯನ್ಸ್ ಫೀಲ್ಡಿಂಗ್ ಆಯ್ಕೆ

***************

ಪ್ರಧಾನಿ ನರೇಂದ್ರ ಮೋದಿ ಅವರಿಂದು ಆಕಾಶವಾಣಿ ಜನಪ್ರಿಯ ಮಾಸಿಕ ಕಾರ್ಯಕ್ರಮ ಮನ್ ಕಿ ಬಾತ್‌ನ ೧೩೨ನೇ ಆವೃತ್ತಿಯಲ್ಲಿ ಸಮಸ್ತ ಭಾರತೀಯರನ್ನುದ್ದೇಶಿಸಿ ಮಾತನಾಡಿದರು.

ಮಾರ್ಚ್‌ನ ಈ ತಿಂಗಳು ಜಾಗತಿಕ ಮಟ್ಟದಲ್ಲಿ ಅತೀವವಾದ ಪ್ರಕ್ಷುಬ್ಧತೆಯಿಂದ ಕೂಡಿದ ಕಾಲವಾಗಿದೆ. ಈ ಹಿಂದೆ, ಇಡೀ ಜಗತ್ತು ಕೋವಿಡ್ ನಿಂದಾಗಿ ದೀರ್ಘಕಾಲದವರೆಗೆ ಹಲವಾರು ಸಮಸ್ಯೆಗಳನ್ನು ಎದುರಿಸಿತ್ತು. ಕೊರೊನಾ ಬಿಕ್ಕಟ್ಟಿನಿಂದ ಹೊರಬಂದ ನಂತರ, ಜಗತ್ತು ಹೊಸ ಚೈತನ್ಯದೊಂದಿಗೆ ಪ್ರಗತಿಯ ಹಾದಿಯಲ್ಲಿ ಮುನ್ನಡೆಯುವುದು ಎಂದು ನಿರೀಕ್ಷಿಸಲಾಗಿತ್ತು. ಆದರೆ, ಪ್ರಪಂಚದ ವಿವಿಧ ಭಾಗಗಳಲ್ಲಿ ನಿರಂತರ ಯುದ್ಧ ಮತ್ತು ಸಂಘರ್ಷದ ಪರಿಸ್ಥಿತಿಗಳು ಉದ್ಭವಿಸುತ್ತಲೇ ಇವೆ ಎಂದು ಬೇಸರ ವ್ಯಕ್ತಪಡಿಸಿದರು.

ಪ್ರಸ್ತುತ ಯುದ್ಧ ನಡೆಯುತ್ತಿರುವ ಪ್ರದೇಶವು ಭಾರತದ ಇಂಧನ ಅಗತ್ಯಗಳ ಪ್ರಮುಖ ಕೇಂದ್ರವಾಗಿದೆ. ಪರಿಣಾಮವಾಗಿ, ಪ್ರಪಂಚದಾದ್ಯಂತ ಪೆಟ್ರೋಲ್ ಮತ್ತು ಡೀಸೆಲ್ ಗೆ ಸಂಬಂಧಿಸಿದಂತೆ ಬಿಕ್ಕಟ್ಟಿನ ಪರಿಸ್ಥಿತಿ ಹೆಚ್ಚುತ್ತಿದೆ ಎಂದರು.

ಭಾರತದ ಜಾಗತಿಕ ರಾಜತಾಂತ್ರಿಕ ಸಂಬಂಧಗಳು, ವಿವಿಧ ರಾಷ್ಟ್ರಗಳಿಂದ ನಾವು ಪಡೆಯುತ್ತಿರುವ ಸಹಕಾರ ಮತ್ತು ಕಳೆದ ದಶಕದಲ್ಲಿ ನಾವು ನಿರ್ಮಿಸಿರುವ ರಾಷ್ಟ್ರೀಯ ಸಾಮರ್ಥ್ಯದಿಂದಾಗಿ, ಭಾರತ ಈ ಸಂದರ್ಭಗಳನ್ನು ಅತ್ಯಂತ ದಿಟ್ಟತನದಿಂದ ಎದುರಿಸುತ್ತಿದೆ ಎಂದು ಪ್ರಧಾನಿ ಮೋದಿ ಹೇಳಿದರು.

ನಿಸ್ಸಂದೇಹವಾಗಿ ಇದೊಂದು ಸವಾಲಿನ ಸಮಯ. ಎಲ್ಲಾ ದೇಶಬಾಂಧವರಲ್ಲಿ ಈ ಬಿಕ್ಕಟ್ಟನ್ನು ಜಯಿಸಲು ಒಗ್ಗಟ್ಟಿನಿಂದ ಜೊತೆಗೂಡಬೇಕಿದೆ. ಈ ವಿಷಯವನ್ನು ಕೂಡ ರಾಜಕೀಯಗೊಳಿಸಲು ಪ್ರಯತ್ನಿಸುತ್ತಿರುವವರು ಅದನ್ನು ನಿಲ್ಲಿಸಬೇಕು. ಈ ವಿಷಯವು ಈ ದೇಶದ ೧೪೦ ಕೋಟಿ ನಾಗರಿಕರ ಹಿತಾಸಕ್ತಿಗಳಿಗೆ ಸಂಬಂಧಿಸಿದ್ದಾಗಿದೆ. ಇಂಥ ಸಂದರ್ಭದಲ್ಲಿ ಸ್ವಾರ್ಥಪರ ರಾಜಕೀಯ ಸಲ್ಲದು. ಇಂತಹ ಸಮಯದಲ್ಲಿ, ವದಂತಿಗಳನ್ನು ಹರಡುತ್ತಿರುವವರು ರಾಷ್ಟ್ರಕ್ಕೆ ಅಪಾರ ಹಾನಿಯನ್ನುಂಟು ಮಾಡುತ್ತಿದ್ದಾರೆ. ಎಲ್ಲಾ ನಾಗರಿಕರು ಜಾಗರೂಕರಾಗಿರಿ ಮತ್ತು ವದಂತಿಗಳಿಗೆ ಕಿವಿಗೊಡಬೇಡಿ ಎಂದು ಅವರು ಮನವಿ ಮಾಡಿದರು.

ದೇಶದ ಅನೇಕ ಭಾಗಗಳಲ್ಲಿ ಬೇಸಿಗೆ ಈಗಾಗಲೇ ಆರಂಭವಾಗಿದೆ, ನೀರಿನ ಸಂರಕ್ಷಣೆಗೆ ನಮ್ಮ ಬದ್ಧತೆಯನ್ನು ನವೀಕರಿಸುವ ಸಮಯ ಬಂದಿದೆ. ಕಳೆದ, ೧೧ ವರ್ಷಗಳಲ್ಲಿ, "ಜಲ ಸಂರಕ್ಷಣಾ ಅಭಿಯಾನ" ಸಾರ್ವಜನಿಕರಲ್ಲಿ ಗಮನಾರ್ಹ ಜಾಗೃತಿ ಮೂಡಿಸಿದೆ. ಈ ಅಭಿಯಾನದಡಿಯಲ್ಲಿ, ದೇಶಾದ್ಯಂತ ಸುಮಾರು ೫೦ ಲಕ್ಷ ಕೃತಕ ನೀರು ಕೊಯ್ಲು ರಚನೆಗಳನ್ನು ನಿರ್ಮಿಸಲಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು.

ನೀರಿನ ಕೊರತೆ ಸಮಸ್ಯೆಯನ್ನು ಬಗೆಹರಿಸಲು ಹಳ್ಳಿ ಹಳ್ಳಿಗಳಲ್ಲಿ ಸಮುದಾಯ ಮಟ್ಟದಲ್ಲಿ ಪ್ರಯತ್ನಗಳು ನಡೆಯುತ್ತಿರುವುದನ್ನು ನೋಡಿದಾಗ ಸಂತಸವೆನಿಸುತ್ತದೆ. ಕೆಲವೆಡೆ ಪ್ರಾಚೀನ ಕೆರೆಗಳನ್ನು ಸ್ವಚ್ಛಗೊಳಿಸುವ ಕೆಲಸ ನಡೆಯುತ್ತಿದ್ದರೆ, ಕೆಲವೆಡೆ ಮಳೆಯ ನೀರನ್ನು ಸಂರಕ್ಷಿಸುವ ಪ್ರಯತ್ನಗಳನ್ನು ಕೈಗೊಳ್ಳಲಾಗುತ್ತಿದೆ ಎಂದರು.

ಅಮೃತ್ ಸರೋವರ್ ಅಭಿಯಾನದ ಅಡಿಯಲ್ಲಿ, ದೇಶಾದ್ಯಂತ ಸುಮಾರು ೭೦ ಸಾವಿರ ಅಮೃತ್ ಸರೋವರಗಳನ್ನು ನಿರ್ಮಿಸಲಾಗಿದೆ. ಮಳೆಗಾಲ ಆರಂಭವಾಗುವ ಮುನ್ನ ಈ ಸರೋವರಗಳನ್ನು ಸ್ವಚ್ಛಗೊಳಿಸುವ ಕೆಲಸ ಆರಂಭವಾಗಿದೆ ಎಂದು ಅವರು ಹೇಳಿದರು.

***************

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ಕೇರಳಂನ ಪಾಲಕ್ಕಾಡ್‌ನ ಕೊಟ್ಟ ಮೈದಾನದಲ್ಲಿ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಿದರು.

ಕೇರಳದ ಪ್ರಗತಿಗೆ ಕೇಂದ್ರ ಸಕಾರದಿಂದ ಅಭೂತಪೂರ್ವ ಬೆಂಬಲ ನೀಡಲಾಗಿದೆ ಎಂದ ಪ್ರಧಾನಿ ಅವರು, ಪಾಲಕ್ಕಾಡ್‌ನಲ್ಲಿ ಕೈಗೊಳ್ಳಲಾದ ಪ್ರಮುಖ ಅಭಿವೃದ್ಧಿ ಯೋಜನೆಗಳ ಬಗ್ಗೆಯೂ ಪ್ರಸ್ತಾಪಿಸಿದರು.

ಇದಕ್ಕೂ ಮುನ್ನ ಮಿಷನ್ ಸ್ಕೂಲ್ ಜಂಕ್ಷನ್‌ನಿಂದ ಎಸ್‌ಬಿಐ ಜಂಕ್ಷನ್‌ವರೆಗೆ ಅವರು ರೋಡ್ ಶೋ ನಡೆಸಿದರು. ತಮ್ಮ ವಾಹನದಿಂದಲೇ ಬೆಂಬಲಿಗರತ್ತ ಕೈಬೀಸಿ, ಅಭಿನಂದನೆ ಸಲ್ಲಿಸಿದರು.

ಕೊಟ್ಟ ಮೈದಾನದಲ್ಲಿ ನಡೆದ ಚುನಾವಣಾ ಪ್ರಚಾರದ ನಂತರ ಪಾಲಕ್ಕಾಡ್ ಜಿಲ್ಲೆಯ ಎನ್‌ಡಿಎ ಅಭ್ಯರ್ಥಿಗಳು ಮತ್ತು ಪಕ್ಷದ ಕಾರ್ಯಕರ್ತರೊಂದಿಗೆ ಪ್ರಧಾನಿ ಸಂವಾದ ನಡೆಸಿದರು.

***************

ದೇಶಾದ್ಯಂತದ ಎಲ್ಲಾ ಪೆಟ್ರೋಲ್ ಪಂಪ್‌ಗಳಲ್ಲಿ ಸಾಕಷ್ಟು ಪೆಟ್ರೋಲ್ ಮತ್ತು ಡೀಸೆಲ್ ದಾಸ್ತಾನು ಲಭ್ಯವಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ವದಂತಿಗಳನ್ನು ನಂಬಬೇಡಿ ಎಂದು ಸಾರ್ವಜನಿಕರಿಗೆ ಸಲಹೆ ನೀಡಿದೆ.

ಗ್ರಾಹಕರನ್ನು ಬೆಂಬಲಿಸಲು ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಅಬಕಾರಿ ಸುಂಕವನ್ನು ಲೀಟರ್‌ಗೆ ೧೦ ರೂಪಾಯಿಗಳಷ್ಟು ಕಡಿಮೆ ಮಾಡಲಾಗಿದೆ. ಅಲ್ಲದೇ, ದೇಶೀಯ ಎಲ್‌ಪಿಜಿ ಪೂರೈಕೆ ಸಾಮಾನ್ಯವಾಗಿದೆ. ಪ್ರತಿದಿನ ೫೫ ಲಕ್ಷಕ್ಕೂ ಹೆಚ್ಚು ಎಲ್‌ಪಿಜಿ ಸಿಲಿಂಡರ್‌ಗಳನ್ನು ವಿತರಿಸಲಾಗುತ್ತಿದೆ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ತಿಳಿಸಿದೆ.

***************

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ವಲಸೆ ಮತ್ತು ವಿದೇಶಾಂಗ ನೀತಿಯನ್ನು ಖಂಡಿಸಿ, ಅಮೆರಿಕ ಮತ್ತು ಯುರೋಪ್‌ನಾದ್ಯಂತ ಲಕ್ಷಾಂತರ ಜನರು ನಗರಗಳಲ್ಲಿ ಜಮಾಯಿಸಿ, ಬೃಹತ್ ಪ್ರತಿಭಟನೆ ನಡೆಸಿದರು.

ಅಮೆರಿಕದ ಸೇಂಟ್ ಪಾಲ್‌ನಲ್ಲಿರುವ ಮಿನೆಸೋಟ ಸ್ಟೇಟ್ ಕ್ಯಾಪಿಟಲ್‌ನಲ್ಲಿ ನಡೆದ ಪ್ರಮುಖ ರ‍್ಯಾಲಿಯಲ್ಲಿ ಅತಿ ಹೆಚ್ಚು ಜನರು ಜಮಾಯಿಸಿದ್ದು, ಇಲ್ಲಿ ಸುಮಾರು ೨ ಲಕ್ಷಕ್ಕೂ ಹೆಚ್ಚು ಪ್ರತಿಭಟನಾಕಾರರು ಭಾಗವಹಿಸಿದ್ದರು ಎಂದು ಅಂದಾಜಿಸಲಾಗಿದೆ.

ಪ್ರತಿಭಟನಾಕಾರರು ಮೆರವಣಿಗೆ ನಡೆಸಿ, ಘೋಷಣೆಗಳನ್ನು ಕೂಗುತ್ತಾ, ಟ್ರಂಪ್ ಆಡಳಿತದ ವಿರುದ್ಧ, ವಿಶೇಷವಾಗಿ ವಲಸೆ ಜಾರಿ ಕ್ರಮಗಳು ಮತ್ತು ಇರಾನ್ ಸಂಘರ್ಷದಲ್ಲಿ ಅಮೆರಿಕ ಭಾಗಿಯಾಗಿರುವುದನ್ನು ಖಂಡಿಸಿದರು.

***************

ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಸಂಘರ್ಷ ಮತ್ತು ಶಾಂತಿ ಮಾತುಕತೆಯ ಪ್ರಯತ್ನಗಳ ಬಗ್ಗೆ ಚರ್ಚಿಸಲು ಪಾಕಿಸ್ತಾನ, ಇಂದು ಸೌದಿ ಅರೇಬಿಯಾ, ಈಜಿಪ್ಟ್ ಮತ್ತು ಟರ್ಕಿ ದೇಶಗಳ ವಿದೇಶಾಂಗ ಸಚಿವರ ಸಭೆಯನ್ನು ಆಯೋಜಿಸಲು ಸಿದ್ಧವಾಗಿದೆ.

ಪಾಕಿಸ್ತಾನ ಉಪ ಪ್ರಧಾನಿ ಮತ್ತು ವಿದೇಶಾಂಗ ಸಚಿವ ಇಶಾಕ್ ದಾರ್ ಅವರ ಆಮಂತ್ರಣದ ಮೇರೆಗೆ ಈಜಿಪ್ಟ್ ವಿದೇಶಾಂಗ ಸಚಿವ ಬದ್ರ್ ಅಬ್ದೆಲಾಟ್ಟಿ ಮತ್ತು ಟರ್ಕಿ ವಿದೇಶಾಂಗ ಸಚಿವ ಹಕನ್ ಫಿಡಾನ್ ನಿನ್ನೆ ರಾತ್ರಿ ಇಸ್ಲಾಮಾಬಾದ್‌ಗೆ ಆಗಮಿಸಿದ್ದಾರೆ ಎಂದು ಪಾಕಿಸ್ತಾನ ವಿದೇಶಾಂಗ ಕಚೇರಿ ತಿಳಿಸಿದೆ,

ಸೌದಿ ವಿದೇಶಾಂಗ ಸಚಿವ, ರಾಜಕುಮಾರ ಫೈಸಲ್ ಬಿನ್ ಫರ್ಹಾನ್ ಅಲ್ ಸೌದ್ ಕೂಡ ಚರ್ಚೆಯಲ್ಲಿ ಭಾಗವಹಿಸಲು ಇಂದು ಇಸ್ಲಾಮಾಬಾದ್‌ಗೆ ಆಗಮಿಸಿದ್ದಾರೆ. ಭೇಟಿ ನೀಡುತ್ತಿರುವ ನಾಯಕರು ಪಾಕಿಸ್ತಾನ ಪ್ರಧಾನಿ ಶೆಹಬಾಜ್ ಷರೀಫ್ ಅವರನ್ನೂ ಭೇಟಿ ಮಾಡಲಿದ್ದಾರೆ ಎಂದು ಪಾಕಿಸ್ತಾನ ವಿದೇಶಾಂಗ ಮಾಹಿತಿ ನೀಡಿದೆ.

***************

ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಕೇಂದ್ರ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಅಭಿವೃದ್ಧಿ ಮತ್ತು ಶಾಂತಿಗೆ ಅಸ್ಸಾಂನಲ್ಲಿ ಆದ್ಯತೆ ನೀಡಲಾಗಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ.

ಅಸ್ಸಾಂ ವಿಧಾನಸಭೆಯ ಚುನಾವಣೆಯ ಹಿನ್ನೆಲೆಯಲ್ಲಿ ನಲ್ಬರಿಯಲ್ಲಿಂದು ಸಾರ್ವಜನಿಕ ಸಮಾವೇಶದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಕಳೆದ ೧೦ ವರ್ಷಗಳಲ್ಲಿ ಬೋಡೊ ಶಾಂತಿ ಒಪ್ಪಂದ, ಕರ್ಬಿ ಒಪ್ಪಂದ ಸೇರಿದಂತೆ ವಿವಿಧ ಒಪ್ಪಂದಗಳನ್ನು ಅನುಷ್ಠಾನಕ್ಕೆ ತರುವ ಮೂಲಕ ಶಾಂತಿ ಕಾಪಾಡಲು ಆದ್ಯತೆ ನೀಡಲಾಗಿದೆ ಎಂದರು.

ಅಸ್ಸಾಂನಲ್ಲಿ ಒಳನುಸುಳುಕೋರರ ತಡೆಗೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ. ಇನ್ನೂ ರಾಜ್ಯದಲ್ಲಿರುವ ಒಳನುಸುಳುಕೋರರನ್ನು ಹೊರಹಾಕಲು ಕ್ರಮ ಕೈಗೊಳ್ಳಲಾಗುತ್ತಿದೆ. ಜೊತೆಗೆ ಅಸ್ಸಾಂನ ಅಭಿವೃದ್ಧಿಗೂ ಕೇಂದ್ರ ಸರ್ಕಾರ ಶ್ರಮಿಸುತ್ತಿದೆ ಎಂದು ಸಚಿವ ಅಮಿತ್ ಶಾ ಹೇಳಿದರು.

***************

ತಮಿಳು ನಟ ಮತ್ತು ರಾಜಕಾರಣಿ ವಿಜಯ್ ಸ್ಥಾಪಿಸಿರುವ ತಮಿಳಗ ವೆಟ್ರಿ ಕಾಳಗಮ್-ಟಿವಿಕೆ ಪಕ್ಷ ಅಭ್ಯರ್ಥಿಗಳ ಮೊದಲ ಪಟ್ಟಿಯನ್ನು ಇಂದು ಬಿಡುಗಡೆ ಮಾಡಿದೆ.

ವಿಜಯ್ ಅವರು ಪೆರಂಬೂರ್ ಮತ್ತು ತಿರುಚಿ ಪೂರ್ವ, ಎರಡು ವಿಧಾನಸಭಾ ಕ್ಷೇತ್ರಗಳಿಂದ ಕಣಕ್ಕಿಳಿಯಲಿದ್ದಾರೆ. ಇತ್ತೀಚೆಗೆ ಎಐಡಿಎಂಕೆ ಪಕ್ಷದ ಮಾಜಿ ಹಿರಿಯ ನಾಯಕ ಸೆಂಗೊಟ್ಟಯ್ಯನ್ ಮತ್ತು ಜೆ.ಸಿ.ಡಿ. ಪ್ರಭಾಕರ್, ಟಿವಿಕೆ ಪಕ್ಷಕ್ಕೆ ಸೇರ್ಪಡೆಯಾಗಿದ್ದಾರೆ.

***************

ಭಾರತದ ಬುಡಕಟ್ಟು ಸಮುದಾಯಗಳು ಪ್ರಕೃತಿಯೊಂದಿಗಿನ ಸಾಮರಸ್ಯದ ಪ್ರಬಲ ಸಂಕೇತಗಳಾಗಿದ್ದು, ಪರಿಸರ ಸಂರಕ್ಷಣೆ ಮತ್ತು ಸಾಂಸ್ಕೃತಿಕ ರಕ್ಷಣೆಯಲ್ಲಿ ನಿರ್ಣಾಯಕ ಪಾತ್ರವಹಿಸುತ್ತವೆ ಎಂದು ಕೇಂದ್ರ ಬುಡಕಟ್ಟು ವ್ಯವಹಾರಗಳ ರಾಜ್ಯ ಸಚಿವ ದುರ್ಗಾದಾಸ್ ಉಯ್ಕೆ ಹೇಳಿದ್ದಾರೆ.

ನವದೆಹಲಿಯಲ್ಲಿ ಇಂದು ನಡೆದ 'ಭಾರತ ಬುಡಕಟ್ಟು ಉತ್ಸವ ೨೦೨೪' ಉದ್ದೇಶಿಸಿ ಮಾತನಾಡಿದ ಸಚಿವರು, ಬುಡಕಟ್ಟು ಸಮುದಾಯಗಳು ಶತಮಾನಗಳಿಂದ ಅರಣ್ಯ, ನೀರು, ಭೂಮಿ ಮತ್ತು ಜೀವ ವೈವಿಧ್ಯದೊಂದಿಗೆ ಸಮತೋಲನದಿಂದ ಬದುಕುತ್ತಿವೆ. ಅವರ ಸಾಂಪ್ರದಾಯಿಕ ಜ್ಞಾನ ಮತ್ತು ಸುಸ್ಥಿರ ಜೀವನಶೈಲಿಯು ಇಡೀ ಜಗತ್ತಿಗೆ ಅಮೂಲ್ಯವಾದ ಪಾಠಗಳನ್ನು ಕಲಿಸುತ್ತವೆ ಎಂದರು.

***************

ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಇಂಡಿಯನ್ ಪ್ರೀಮಿಯರ್ ಲೀಗ್-ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಮತ್ತು ಕೋಲ್ಕತಾ ನೈಟ್ ರೈಡರ್ಸ್ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಗೆದ್ದ ಮುಂಬೈ ಇಂಡಿಯನ್ಸ್ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

***************

ಮಂಗೋಲಿಯಾದ ಉಲಾನ್‌ಬಾಟರ್‌ನಲ್ಲಿ ನಾಳೆಯಿಂದ ಆರಂಭವಾಗಲಿರುವ ಏಷ್ಯನ್ ಚಾಂಪಿಯನ್‌ಶಿಪ್‌ನಲ್ಲಿ ಭಾರತದ ಬಾಕ್ಸರ್‌ಗಳು ತಮ್ಮ ಅಭಿಯಾನ ಆರಂಭಿಸಲಿದ್ದಾರೆ.

ಭಾರತೀಯ ಬಾಕ್ಸಿಂಗ್ ಫೆಡರೇಷನ್‌ನ ಆಯ್ಕೆ ನೀತಿಯ ಪ್ರಕಾರ, ಈ ಚಾಂಪಿಯನ್‌ಶಿಪ್‌ನಲ್ಲಿ ಫೈನಲ್ ತಲುಪುವವರು ಕಾಮನ್‌ವೆಲ್ತ್ ಗೇಮ್ಸ್ ಮತ್ತು ಏಷ್ಯನ್ ಗೇಮ್ಸ್‌ಗೆ ನೇರ ಅರ್ಹತೆ ಪಡೆಯುವುದರಿಂದ ಈ ಪಂದ್ಯಾವಳಿಯು ಹೆಚ್ಚಿನ ಪ್ರಾಮುಖ್ಯತೆ ಪಡೆಯುತ್ತದೆ.

***************